ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

{ಆಯುಕ್ತರ ಕಛೇರಿ, ಉನ್ನತ ಶಿಕ್ಷಣ ಸೌಧ, ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು-560001}

ಸಂಖ್ಯೆ: ಕಾಶಿಇ/ನೇವಿ-1/ಅಉಆ/90/2023-24 ದಿನಾಂಕ: 02 .11.2023.

## ಸುತ್ತೋಲೆ

ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: 1) ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:06.10.2023.

2) ಸರ್ಕಾರದ ಪತ್ರ ಸಂಖ್ಯೆ:ಇಡಿ/171/ಡಿಸಿಇ/2023(ಇ), ದಿನಾಂಕ:31.10.2023.

* * * * * * *

2023-24ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರ ಆಯ್ಕೆಯ ಕುರಿತು ಹೊರಡಿಸಿದ ಉಲ್ಲೇಖ-(1) ರ ಸುತ್ತೋಲೆಯಲ್ಲಿನ ಕ್ರ.ಸಂ.: (6) ರಲ್ಲಿ "2023-24ನೇ ಶೈಕ್ಷಣಿಕ ಸಾಲಿಗೆ ಆಯ್ಕೆಗೊಳ್ಳುವ ಅತಿಥಿ ಉಪನ್ಯಾಸಕರನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಶೈಕ್ಷಣಿಕ ವೇಳಾಪಟ್ಟಿಯಂತೆ 2023-24ನೇ ಶೈಕ್ಷಣಿಕ ಸಾಲಿನ ಮುಕ್ತಾಯದವರೆಗೆ ಅಥವಾ 10 ತಿಂಗಳಿಗೆ ಮಾತ್ರ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮುಂದುವರೆಸಿ, ನಂತರ ಕರ್ತವ್ಯದಿಂದ ಬಿಡುಗಡೆಗೊಳಿಸುವುದು" ಎಂಬುದಾಗಿ ಸೂಚಿಸಲಾಗಿತ್ತು.

ಉಲ್ಲೇಖ - 2 ರ ಸರ್ಕಾರದ ಪತ್ರದನ್ವಯ ದಿನಾಂಕ:06.10.2023 ರ ಸುತ್ತೋಲೆಯಲ್ಲಿನ ಕ್ರ.ಸಂ.:(6) ರ ಬದಲಾಗಿ ಈ ಕೆಳಕಂಡಂತೆ ಓದಿಕೊಳ್ಳುವುದು.

**"2023-24 ನೇ ಸಾಲಿಗೆ ಆಯ್ಕೆಗೊಳ್ಳುವ ಅತಿಥಿ ಉಪನ್ಯಾಸಕರನ್ನು ಸೆಮಿಸ್ಟರ್ ಬದಲಾಗಿ, ಶೈಕ್ಷಣಿಕ ವರ್ಷಕ್ಕೆ (10 ತಿಂಗಳಿಗೆ ಮಾತ್ರ) ನೇಮಕ ಮಾಡಿಕೊಳ್ಳಲು ಸೂಚಿಸಲಾಗಿದೆ".**

ಆಯುಕ್ತರು
ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ,

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ.
2) ಇಲಾಖೆಯ ಎಲ್ಲಾ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.